**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: 2010-11ನೇ ಸಾಲಿನಿಂದ ಡಿಪ್ಲೊಮಾ ಕೋರ್ಸುಗಳಿಗೆ ಪರಿಷ್ಕೃತ ಪಠ್ಯಕ್ರಮಗಳನ್ನು ಅಳವಡಿಸುವ ಕುರಿತು.

No. 934
Date 13/8/10

**ಓದಲಾಗಿದೆ:**

(1) ಸರ್ಕಾರದ ಆದೇಶ ಸಂಖ್ಯೆ:ಇಡಿ 178 ಟಿಪಿಇ 2009, ದಿನಾಂಕ:1-8-2009.
(2) ತಾಂತ್ರಿಕ ಶಿಕ್ಷಣ ನಿರ್ದೇಶಕರ ಪತ್ರ ಸಂಖ್ಯೆ:ಡಿಟಿಇ 117 ಸಿಡಿಸಿ 2010-11, ದಿನಾಂಕ:12-7-2010.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ರಾಜ್ಯದ ಪಾಲಿಟೆಕ್ನಿಕ್‌ಗಳಲ್ಲಿ ಡಿಪ್ಲೊಮಾ ಕೋರ್ಸುಗಳ 1 ನೇ ಮತ್ತು 2ನೇ ಸೆಮಿಸ್ಟರ್‌ಗಳಿಗೆ ಪರಿಷ್ಕೃತ ಪಠ್ಯಕ್ರಮಗಳನ್ನು 2009-10ನೇ ಶೈಕ್ಷಣಿಕ ವರ್ಷದಿಂದ ಅಳವಡಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ತಾಂತ್ರಿಕ ಶಿಕ್ಷಣ ನಿರ್ದೇಶಕರು ಮೇಲೆ ಓದಲಾದ (2)ರ ಪತ್ರದಲ್ಲಿ ರಾಜ್ಯದ ಪಾಲಿಟೆಕ್ನಿಕ್‌ಗಳ ಡಿಪ್ಲೊಮಾ ಕೋರ್ಸುಗಳ 1 ನೇ ಮತ್ತು 2ನೇ ಸೆಮಿಸ್ಟರ್‌ಗಳಿಗೆ ಪರಿಷ್ಕೃತ ಪಠ್ಯಕ್ರಮಗಳನ್ನು 2009-10ನೇ ಸಾಲಿನಿಂದ ಜಾರಿಗೆ ಬರುವಂತೆ ಸರ್ಕಾರದ ಆದೇಶ ಸಂಖ್ಯೆ:ಇಡಿ 178 ಟಿಪಿಇ 2009, ದಿನಾಂಕ:1-8-2009 ರನ್ವಯ ಪರಿಷ್ಕರಿಸಿ ಆದೇಶಿಸಲಾಗಿದೆ. ಮುಂದುವರೆದು 3ನೇ ಮತ್ತು 4ನೇ ಸೆಮಿಸ್ಟರ್‌ಗಳ ಪಠ್ಯಕ್ರಮಗಳನ್ನು ವಿವಿಧ ಪಾಲಿಟೆಕ್ನಿಕ್‌ಗಳ ವಿಷಯ ಪರಿಣಿತರು ಎನ್.ಐ.ಟಿ.ಟಿ.ಆರ್, ಚೆನ್ನೈ ಸಂಸ್ಥೆ, ಯಶಸ್ವಿ ಉದ್ದಿಮೆದಾರರು ಹಾಗೂ ಬಾಹ್ಯ ವಿಷಯ ಪರಿಣಿತರ ಸಹಯೋಗದಿಂದ ಪರಿಷ್ಕರಿಸಿದ್ದು 2010-11ನೇ ಶೈಕ್ಷಣಿಕ ವರ್ಷದಿಂದ ಪಾಲಿಟೆಕ್ನಿಕ್‌ಗಳಿಗೆ ಅಳವಡಿಸಲು ದಿನಾಂಕ:09-7-2010 ರಂದು ನಡೆದ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ 148 ನೇ ಕೇಂದ್ರ ಪರೀಕ್ಷಾ ಮಂಡಳಿಯ ಸಭೆಯಲ್ಲಿ ನಿರ್ಣಯಿಸಲಾಗಿದೆ. ಆದುದರಿಂದ ಪಾಲಿಟೆಕ್ನಿಕ್‌ಗಳ ಡಿಪ್ಲೊಮಾ ಕೋರ್ಸುಗಳ 3ನೇ ಹಾಗೂ 4ನೇ ಸೆಮಿಸ್ಟರ್‌ಗಳು 2010-11ನೇ ಶೈಕ್ಷಣಿಕ ವರ್ಷದ ಜುಲೈ ಕೊನೆ ವಾರದಿಂದ ತರಗಳನ್ನು ಪ್ರಾರಂಭಿಸಬೇಕಾಗಿರುವುದರಿಂದ ಪರಿಷ್ಕೃತ ಪಠ್ಯಕ್ರಮಗಳನ್ನು ಅಳವಡಿಸಿಕೊಳ್ಳಲು ಸೂಕ್ತ ಆದೇಶವನ್ನು ಶೀಘ್ರವಾಗಿ ಹೊರಡಿಸಬೇಕೆಂದು ಕೋರಲಾಗಿದೆ.

ಮೇಲಿನ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 227 ಟಿಪಿಇ 2010**
**ಬೆಂಗಳೂರು, ದಿನಾಂಕ: 12 ನೇ ಆಗಸ್ಟ್ 2009.**

ಪ್ರಸ್ತಾವನೆಯಲ್ಲಿ ವಿವರಿಸಿದ ಹಿನ್ನೆಲೆಯಲ್ಲಿ ರಾಜ್ಯದಲ್ಲಿನ ಎಲ್ಲಾ ಪಾಲಿಟೆಕ್ನಿಕ್‌ನ ಡಿಪ್ಲೊಮಾ ಕೋರ್ಸುಗಳ ಮೂರನೇ ಮತ್ತು ನಾಲ್ಕನೇ ಸೆಮಿಸ್ಟರ್‌ನ ಪಠ್ಯಕ್ರಮಗಳು 2010-11ನೇ ಶೈಕ್ಷಣಿಕ ಸಾಲಿನಿಂದ ಅನ್ವಯವಾಗುವಂತೆ ಪರಿಷ್ಕರಿಸಲ್ಪಟ್ಟಿರುತ್ತವೆ ಹಾಗೂ ಅನ್ವಯವಾಗುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಎನ್.ಜಗದೀಶ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).

**ಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಇದನ್ನು ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಿ ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ಗೆ 50 ಪ್ರತಿಗಳನ್ನು ಕಳುಹಿಸುವುದು.

**ಪ್ರತಿ:**

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
2. ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರಿಗೆ (ತಾಂತ್ರಿಕ ಶಿಕ್ಷಣ ನಿರ್ದೇಶಕರ ಮುಖಾಂತರ)
3. **ಶಾಖಾ ರಕ್ಷಾ ಕಡತ**
4. **ಹೆಚ್ಚಿನ ಪ್ರತಿ**